# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **725 (794)**
ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 16.12.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | ಸಮಾನ ವಿದ್ಯಾರ್ಹತೆ, ಸಮಾನ ವೇತನ ಹಾಗೂ ಒಂದೇ ನೇಮಕಾತಿ ವಿಧಾನವಿದ್ದರೂ ಸಹ ಶಿಕ್ಷಕರು ಮತ್ತು ದೈಹಿಕ ಶಿಕ್ಷಕರುಗಳಲ್ಲಿ ತಾರತಮ್ಯ ಧೋರಣೆ ತೋರಲಾಗಿದೆಯೇ; | ಇಲ್ಲ.<br><br>ಆದರೆ ಶಾಲಾ ಶಿಕ್ಷಣ ಇಲಾಖೆಯ ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಿಗೆ ಪ್ರತ್ಯೇಕವಾದ ವೃಂದ ಮತ್ತು ನೇಮಕಾತಿ ನಿಯಮಗಳಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ. |
| ಆ) | ದೈಹಿಕ ಶಿಕ್ಷಕರನ್ನು ಸಹ ಶಿಕ್ಷಕರು ಎಂದು ಪರಿಗಣಿಸಿ ಸಹ ಶಿಕ್ಷಕರಿಗೆ ಒದಗಿಸುತ್ತಿರುವ ಸೌಲಭ್ಯಗಳನ್ನು ದೈಹಿಕ ಶಿಕ್ಷಕರುಗಳಿಗೆ ನೀಡಲಾಗುತ್ತಿದೆಯೇ; | |
| ಇ) | ದೈಹಿಕ ಶಿಕ್ಷಕರುಗಳನ್ನು ಸಹ ಶಿಕ್ಷಕರು ಎಂದು ಪರಿಗಣಿಸಿ ಹೆಚ್.ಆರ್.ಎಂ.ಎಸ್.ನಲ್ಲಿ ದಾಖಲು ಮಾಡಲಾಗುತ್ತಿದೆಯೇ; | ದೈಹಿಕ ಶಿಕ್ಷಕರುಗಳನ್ನು ಹೆಚ್.ಆರ್.ಎಂ.ಎಸ್. ನಲ್ಲಿ ದಾಖಲು ಮಾಡಲಾಗುತ್ತಿದೆ. |
| ಈ) | ಸುಮಾರು ವರ್ಷಗಳಿಂದ ನೇಮಕಾತಿ ಇಲ್ಲದೇ ಪದವಿ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ದೈಹಿಕ ನಿರ್ದೇಶಕರು / ಪ್ರೊಫೆಸರ್ ಹುದ್ದೆಗೆ ನೇಮಕಾತಿ ಮಾಡಿಕೊಳ್ಳದೇ ಇರುವುದರಿಂದ ನೇಮಕಾತಿ ಅಧಿಸೂಚನೆಯನ್ನು ಯಾವಾಗ ಹೊರಡಿಸಲಾಗುವುದು; | ಸರ್ಕಾರದ ಆದೇಶ ಸಂಖ್ಯೆ: ಇಡಿ 69 ಯುಇಸಿ 2021(ಇ), ದಿನಾಂಕ: 18.01.2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 27 ದೈಹಿಕ ಶಿಕ್ಷಣ ನಿರ್ದೇಶಕರು ಮತ್ತು 23 ಗ್ರಂಥಪಾಲಕರುಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬದಲಾಗಿ ಪ್ರತಿ ಹುದ್ದೆಗೆ ಮಾಸಿಕ ಬದಲಾಗಿ ಪ್ರತಿ ಹುದ್ದೆಗೆ ಮಾಸಿಕ ರೂ.40,000/- ಮಿತಿಯೊಳಗೆ ಸಂಚಿತ ಮೊತ್ತ (consolidated pay) ನೀಡುವ ಷರತ್ತಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಕೆಲವು ಷರತ್ತುಗಳಿಗೆ ಒಳಪಟ್ಟು ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿರುತ್ತದೆ. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಬೋಧಕ ಮತ್ತಿತರ ಶೈಕ್ಷಣಿಕ ಸಿಬ್ಬಂದಿಗಳ ನೇಮಕಾತಿ ಮತ್ತು |

| | | |
|---|---|---|
| | | ಪದೋನ್ನತಿಗೆ ಸಂಬಂಧಿಸಿದಂತೆ ಪ್ರಸ್ತುತ ಚಾಲ್ತಿಯಲ್ಲಿರುವ UGC Regulations 2018ರನ್ವಯ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆಯಡಿ ಉನ್ನತ ಶಿಕ್ಷಣ ಇಲಾಖೆಯು ಸಿದ್ಧಪಡಿಸಿರುವ ಏಕರೂಪ ಪರಿನಿಯಮ "The Statutes relating to appointment, Promotion of teachers and other academic staff and measures for the maintenance of standards in higher education in the Universities, as per the UGC Regulations 2018" ನ್ನು ರಚಿಸಿಕೊಂಡು ಘನತವೆತ್ತ ಕುಲಾಧಿಪತಿಗಳಿಂದ ಅಂಕಿತಪಡೆದಿರುವ ಪರಿನಿಯಮದನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ವಿಶ್ವವಿದ್ಯಾಲಯಗಳಿಗೆ ಸರ್ಕಾರವು ನಿಯಮಾನುಸಾರ ನೇಮಕಾತಿ ಅನುಮೋದನೆ ನೀಡಲು ಪರಿಶೀಲಿಸಲಾಗುವುದು. |

ಸಂಖ್ಯೆ: ಇಪಿ 303 ಎಲ್‌ಬಿಪಿ 2024

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು